ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 19 ನೇ ಮಾರ್ಚ್, 2020

ವಿದ್ಯುಚ್ಛಕ್ತಿ ಉತ್ಪಾದನೆ ಬಗ್ಗೆ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-

1251 (1524) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಯಾವ ಯಾವ ಮೂಲದಿಂದ ಎಷ್ಟು ಪ್ರಮಾಣದ ವಿದ್ಯುಚ್ಛಕ್ತಿಯನ್ನು ಉತ್ಪಾದನೆ ಮಾಡಲಾಗುತ್ತಿದೆ ; (ಪ್ರತ್ಯೇಕವಾಗಿ ಪೂರ್ಣ ವಿವರ ನೀಡುವುದು)

(ಆ) ರಾಜ್ಯಕ್ಕೆ ಅಗತ್ಯವಿರುವ ವಿದ್ಯುತ್ ಪ್ರಮಾಣವೆಷ್ಟು ;

(ಇ) ಹೊಸದಾಗಿ ವಿದ್ಯುಚ್ಛಕ್ತಿ ಉತ್ಪಾದನೆಗೆ ಸರ್ಕಾರ ಕೈಗೊಂಡಿರುವ ಯೋಜನೆಗಳೇನು ;

(ಈ) ಸದರಿ ಯೋಜನೆಯ ಅಂದಾಜು ಮೊತ್ತವೆಷ್ಟು ; (ಪೂರ್ಣ ವಿವರ ನೀಡುವುದು)

(ಉ) ರೈತರ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುಚ್ಛಕ್ತಿ ಸೌಲಭ್ಯವನ್ನು ಕಲ್ಪಿಸಲಾಗುತ್ತಿದೆಯೇ ; ಇದಕ್ಕೆ ಅನುಸರಿಸುತ್ತಿರುವ ಮಾನದಂಡಗಳೇನು ;

(ಊ) ರೈತರ ಪಂಪ್‌ಸೆಟ್‌ಗಳಿಗೆ ಯಾವ ಪ್ರಮಾಣದ ವಿದ್ಯುತ್‌ನ್ನು ಪ್ರತಿನಿತ್ಯ ಎಷ್ಟು ಸಮಯದವರೆಗೆ ನೀಡಲಾಗುತ್ತಿದೆ ?